# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 974

ಸದಸ್ಯರ ಹೆಸರು : ಶ್ರೀ ಕುಶಾಲಪ್ಪ ಎಂ.ಪಿ (ಸುಜಾ)
( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 22.02.2024

ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸರ್ಕಾರಿ ನೌಕರರಿಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೇರ್ಗಡೆ ಹೊಂದುವುದು ಕಡ್ಡಾಯಗೊಳಿಸಲಾಗಿದೆಯೇ; ದಿನಾಂಕ:31.12.2023ರ ಒಳಗಾಗಿ ತೇರ್ಗಡೆಯನ್ನು ಹೊಂದದೇ ಇರುವ ಅಧಿಕಾರಿ /ನೌಕರರಿಗೆ ವಾರ್ಷಿಕ ವೇತನ ಬಡ್ತಿಯನ್ನು ತಡೆಹಿಡಿಯಲಾಗುವುದೇ; (ಸರ್ಕಾರಿ ಆದೇಶದ ಪ್ರತಿಯನ್ನು ನೀಡುವುದು) | ರಾಜ್ಯ ಸರ್ಕಾರಿ ನೌಕರರಿಗೆ ಕಂಪ್ಯೂಟರ್ ಬಳಕೆಯ ಸಾಮಾನ್ಯ ಜ್ಞಾನವನ್ನು ಕಡ್ಡಾಯಗೊಳಿಸುವ ನಿಟ್ಟಿನಲ್ಲಿ ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012ನ್ನು ರೂಪಿಸಲಾಗಿದೆ. ಈ ನಿಯಮಾವಳಿಗಳ ನಿಯಮ 1(3)ರಲ್ಲಿ ನಿರ್ಧಿಷ್ಟಪಡಿಸಿರುವ ಕೆಲವೊಂದು ಹುದ್ದೆಗಳನ್ನು ಹೊರತುಪಡಿಸಿ ಹಾಗೂ ನಿಯಮ 3ರನ್ವಯ ಈ ನಿಯಮಗಳು ಪ್ರಾರಂಭವಾದ ದಿನಾಂಕದಂದು 50 ವರ್ಷಗಳ ವಯಸ್ಸಾಗಿರುವ ಸರ್ಕಾರಿ ನೌಕರರನ್ನು ಹೊರತುಪಡಿಸಿ ಉಳಿದ ಸರ್ಕಾರಿ ನೌಕರರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಪಾಸು ಮಾಡುವುದನ್ನು ಕಡ್ಡಾಯಗೊಳಿಸಲಾಗಿದೆ.<br><br>ಈ ಪರೀಕ್ಷೆಯು ಸರ್ಕಾರಿ ನೌಕರರ ಪರಿವೀಕ್ಷಣಾ ಅವಧಿ, ಮುಂಬಡ್ತಿ ಹಾಗೂ ವಾರ್ಷಿಕ ವೇತನ ಬಡ್ತಿಗೆ ಒಂದು ಅರ್ಹತಾ ಮಾನದಂಡವಾಗಿರುತ್ತದೆ. ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಲು ನಿಗಧಿಪಡಿಸಲಾಗಿದ್ದ ಕಾಲಾವಧಿಯನ್ನು ಅಧಿಸೂಚನೆ ಸಂಖ್ಯೆ: ಸಿಆಸುಇ 136 ಸೇವನೆ 2022, ದಿನಾಂಕ:17.02.2023ರನ್ವಯ ದಿನಾಂಕ: 31.12.2023ರವರೆಗೆ ವಿಸ್ತರಿಸಲಾಗಿತ್ತು. ಸದರಿ ಅವಧಿಯೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣನಾಗದೇ ಇದ್ದಲ್ಲಿ ವಾರ್ಷಿಕ ಬಡ್ತಿ ಗಳಿಸಲು ಅರ್ಹನಾಗತಕ್ಕದ್ದಲ್ಲ ಎಂದು ನಿಯಮಗಳಲ್ಲಿ ಸ್ಪಷ್ಟಪಡಿಸಲಾಗಿದೆ. (ಅಧಿಸೂಚನೆಯ ಪ್ರತಿಯನ್ನು ಲಗತ್ತಿಸಿದೆ) |

| | | |
|---|---|---|
| ಆ) | ತೇರ್ಗಡೆಯನ್ನು ಹೊಂದಲು ಅವಧಿಯನ್ನು ವಿಸ್ತರಿಸಲಾಗಿದೆಯೇ; (ಸರ್ಕಾರಿ ಆದೇಶದ ಪ್ರತಿಯನ್ನು ನೀಡುವುದು) | ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಲು ನಿಗದಿಪಡಿಸಿದ್ದ ಕಾಲಾವಧಿಯನ್ನು ದಿನಾಂಕ:31-12-2024 ರವರೆಗೆ ವಿಸ್ತರಿಸಿ ದಿನಾಂಕ: 07.02.2024ರಂದು ಕರಡು ನಿಯಮಗಳನ್ನು ಪ್ರಕಟಿಸಿ ಅಧಿಸೂಚನೆ ಹೊರಡಿಸಲಾಗಿದೆ. (ಅಧಿಸೂಚನೆಯ ಪ್ರತಿಯನ್ನು ಲಗತ್ತಿಸಿದೆ) |
| ಇ) | ದಿನಾಂಕ:17.04.2021ರೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೇರ್ಗಡೆ ಹೊಂದಿದ ಅಧಿಕಾರಿ ನೌಕರರಿಗೆ ರೂ.5000/- ಪ್ರೋತ್ಸಾಹ ಧನವನ್ನು ನೀಡಲಾಗುತ್ತಿದ್ದು, ತದನಂತರದ ದಿನಾಂಕದಲ್ಲಿ ತೇರ್ಗಡೆ ಹೊಂದಿದ ಅಧಿಕಾರಿ/ನೌಕರರಿಗೆ ಪ್ರೋತ್ಸಾಹ ಧನವನ್ನು ನೀಡಲು ಆದೇಶ ಹೊರಡಿಸಲಾಗಿದೆಯೇ; (ಆದೇಶದ ಪ್ರತಿ ನೀಡುವುದು) | ದಿನಾಂಕ: 17.04.2021ರ ನಂತರದಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ಯಾವುದೇ ವೃಂದದ ಅಧಿಕಾರಿ / ನೌಕರರಿಗೆ ಪ್ರೋತ್ಸಾಹ ಧನ ನೀಡಲು ಆದೇಶ ಹೊರಡಿಸಿರುವುದಿಲ್ಲ. |
| ಈ) | ಗ್ರೂಪ್ ಡಿ ನೌಕರರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೇರ್ಗಡೆಯನ್ನು ಹೊಂದಿದ್ದಲ್ಲಿ ರೂ.5000/-ಗಳ ಪ್ರೋತ್ಸಾಹ ಧನವನ್ನು ನೀಡಲಾಗುವುದೇ; ಈ ಬಗ್ಗೆ ಸ್ಪಷ್ಟವಾದ ಮಾಹಿತಿಯನ್ನು ನೀಡುವುದು? | ದಿನಾಂಕ: 22.03.2012ರಂದು ಸರ್ಕಾರಿ ಸೇವೆಯಲ್ಲಿದ್ದ ಗ್ರೂಪ್-ಡಿ ನೌಕರರು ಸೇರಿದಂತೆ ದಿನಾಂಕ:17.04.2021ರೊಳಗಾಗಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣ ಹೊಂದಿದ ಎಲ್ಲಾ ವೃಂದದ ಅಧಿಕಾರಿ/ನೌಕರರಿಗೆ ರೂ.5000/-ಗಳ ಪ್ರೋತ್ಸಾಹ ಧನ ನೀಡಲಾಗುವುದು. |

ಸಂಖ್ಯೆ: ಸಿಆಸುಇ 13 ಸೇವನೆ 2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ.